ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.

ಸಂಖ್ಯೆ:ಸಿ4(4)ದೈ.ಶಿ.ಶಿ.ಬೇ-18/2019-20 ದಿನಾಂಕ:13.07.2020

### ಜ್ಞಾಪನ

ವಿಷಯ:-ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಶಿಕ್ಷಕರಿಗೆ ಬಡ್ತಿ ನೀಡುವ ಬಗ್ಗೆ.

ಉಲ್ಲೇಖ:-1)ಶ್ರೀ.ಸಿ.ಎಸ್.ಷಡಾಕ್ಷರಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಿ.ಇ.ಎ.212/2019-20 ದಿನಾಂಕ:12.02.2020.

2)ಅಧ್ಯಕ್ಷರು, ಕ.ರಾ.ಸ.ಪ್ರಾಥಮಿಕ ಶಾಲಾ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಮನವಿ ದಿನಾಂಕ:12.02.2020.

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಶ್ರೀ ಸಿ.ಎಸ್.ಷಡಾಕ್ಷರಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಇವರು ಉಲ್ಲೇಖಿತ ಪತ್ರದಲ್ಲಿ ಮನವಿಯನ್ನು ಸಲ್ಲಿಸಿ, ಉಲ್ಲೇಖ-2ರ ಪತ್ರದಲ್ಲಿ ಅಧ್ಯಕ್ಷರು, ಕ.ರಾ.ಸ.ಪ್ರಾಥಮಿಕ ಶಾಲಾ ಗ್ರೇಡ್-2 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ದೈಹಿಕ ಶಿಕ್ಷಣ ಶಿಕ್ಷಕರು ಸಲ್ಲಿಸಿರುವ ಬೇಡಿಕೆಗಳಿಗೆ ಸಂಬಂಧಿಸಿದಂತೆ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಶಿಕ್ಷಕರಿಗೆ ಬಡ್ತಿ ನೀಡಬೇಕೆಂದು ಮನವಿ ಸಲ್ಲಿಸಿರುತ್ತಾರೆ. ಆದ್ದರಿಂದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-2 ಶಿಕ್ಷಕರಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ನಿಯಮಾನುಸಾರ ಪರಿಶೀಲಿಸಿ, ಗ್ರೇಡ್-1 ಹುದ್ದೆಗೆ ಬಡ್ತಿ ನೀಡಲು ಅಗತ್ಯ ಕ್ರಮವಹಿಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ತಿಳಿಸಿದೆ. ಹಾಗೂ ಬಡ್ತಿ ನೀಡಿದ ನಂತರ ತಮ್ಮ ತಮ್ಮ ವಿಭಾಗದ ಆಯ್ಕೆ ಪ್ರಾಧಿಕಾರಿಗಳು ಹಾಗೂ ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಮಾಹಿತಿಯನ್ನು ಮತ್ತು ಬಡ್ತಿ ನೀಡಿದ ಶಿಕ್ಷಕರ ವಿವರಗಳನ್ನು ಸಲ್ಲಿಸಲು ತಿಳಿಸಿದೆ.

(ಕೃಷ್ಣಾಜಿ ಎಸ್. ಕರಿಚಣ್ಣವರ)
ನಿರ್ದೇಶಕರು (ಪ್ರೌಢಶಿಕ್ಷಣ)

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳನ್ನು:-

1. ಆಯ್ಕೆ ಪ್ರಾಧಿಕಾರಿಗಳು ಹಾಗೂ ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ಆಯ್ಕೆ ಪ್ರಾಧಿಕಾರಿಗಳು ಹಾಗೂ ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ಇವರಿಗೆ ಮಾಹಿತಿಗಾಗಿ.
3. ಆಯ್ಕೆ ಪ್ರಾಧಿಕಾರಿಗಳು ಹಾಗೂ ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಇವರಿಗೆ ಮಾಹಿತಿಗಾಗಿ.
4. ಆಯ್ಕೆ ಪ್ರಾಧಿಕಾರಿಗಳು ಹಾಗೂ ವಿಭಾಗೀಯ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಇವರಿಗೆ ಮಾಹಿತಿಗಾಗಿ.
5. ಶ್ರೀ.ಸಿ.ಎಸ್.ಷಡಾಕ್ಷರಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಕಛೇರಿ ಪ್ರತಿ.

kpeta.weebly.com

CS Scanned with CamScanner

Scanned by CamScanner